## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 614 (810) |
| ಸದಸ್ಯರ ಹೆಸರು | : | ಶ್ರೀ ನಿರಾಣಿ ಹನುಮಂತ್ ರುದ್ರಪ್ಪ |
| ಉತ್ತರಿಸುವ ದಿನಾಂಕ | : | 11.03.2020 |
| ಉತ್ತರಿಸುವ ಸಚಿವರು | : | ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು |

| ಕ್ರ. ಸಂ | ವಿಷಯ | ಉತ್ತರ |
|---|---|---|
| ಅ) | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ (ಕ್ರೈಸ್) ವತಿಯಿಂದ ನಡೆಯುತ್ತಿರುವ ವಸತಿ ಶಾಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು |
| ಆ) | ಕುಮಾರನಾಯಕ ವರದಿಯಂತೆ ಸದರಿ ನೌಕರರುಗಳಿಗೆ ಸೌಲಭ್ಯಗಳನ್ನು ಕಲ್ಪಿಸುವಲ್ಲಿ ಸರ್ಕಾರ ವಿಳಂಬ ನೀತಿ ಅನುಸರಿಸುತ್ತಿರುವುದಕ್ಕೆ ಕಾರಣಗಳೇನು; | ಕರ್ನಾಟಕ ರಾಜ್ಯದಲ್ಲಿನ ಬೋಧಕ ಸಿಬ್ಬಂದಿಗಳಿಗೆ ಹೊರ ರಾಜ್ಯದಲ್ಲಿನ ಬೋಧಕ ಸಿಬ್ಬಂದಿಗಳಿಗೆ ನೀಡುವ ವೇತನಕ್ಕಿಂತ ಕಡಿಮೆ ನೀಡಲಾಗುತ್ತಿತ್ತು. ರಾಜ್ಯದ ಬೋಧಕ ಸಿಬ್ಬಂದಿಗಳಿಗೆ ವೇತನ ಮತ್ತು ಇತರೆ ಭತ್ಯೆಗಳನ್ನು ನೀಡುವುದಕ್ಕೆ ಸಂಬಂಧಿಸಿದಂತೆ ಶ್ರೀ ಕುಮಾರ ನಾಯಕ್ ಸಮಿತಿಯನ್ನು ನೇಮಿಸಲಾಗಿತ್ತು. ಆದರೆ, ಈ ಸಮಿತಿಯ ವರದಿ ಸ್ವೀಕೃತವಾಗುವುದರೊಳಗಾಗಿ ಅಂದರೆ 2012 ರಲ್ಲಿ ಪರಿಷ್ಕೃತ ವೇತನ ಶ್ರೇಣಿ ಜಾರಿಗೆ ಬಂದಿತ್ತು. ಈ ಪರಿಷ್ಕೃತ ವೇತನ ಶ್ರೇಣಿಯಲ್ಲಿ ಬೇರೆ ರಾಜ್ಯದ ಬೋಧಕ ಸಿಬ್ಬಂದಿಗಳಿಂತ ಹೆಚ್ಚಿನ ವೇತನ ನಿಗಧಿಪಡಿಸಿರುವುದರಿಂದ, ಶ್ರೀ ಕುಮಾರ ನಾಯಕ್ ಸಮಿತಿ ವರದಿಯಲ್ಲಿನ ಒಂದು ವಿಶೇಷ ವೇತನ ಬಡ್ತಿ ನೀಡುವ ಅಗತ್ಯತೆ ಇರುವುದಿಲ್ಲವೆಂದು ಆರ್ಥಿಕ ಇಲಾಖೆಯು ಪ್ರಸ್ತಾವನೆಯನ್ನು ತಿರಸ್ಕರಿಸಿದೆ.<br><br>ವಸತಿ ಶಾಲೆ ಶಿಕ್ಷಕರುಗಳ ಕರ್ತವ್ಯಗಳು ಮತ್ತು ಶಿಕ್ಷಣ ಇಲಾಖೆಯ ಶಿಕ್ಷಕರುಗಳ ಕರ್ತವ್ಯಗಳನ್ನು ಪರಸ್ಪರ ಹೋಲಿಸಲು ಬರುವುದಿಲ್ಲ. ಎರಡೂ ವೃಂದಗಳ ವೃಂದ ಮತ್ತು ನೇಮಕಾತಿ ನಿಯಮಗಳು ಬೇರೆ ಬೇರೆಯಾಗಿದ್ದು, ಒಂದರ ನಿಯಮವನ್ನು ಮತ್ತೊಂದಕ್ಕೆ ಹೋಲಿಸಿ ಅನ್ವಯಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ ಎಂಬ ಕಾರಣಗಳನ್ನು ಆರ್ಥಿಕ ಇಲಾಖೆಯು ನೀಡಿ ಪ್ರಸ್ತಾವನೆಯನ್ನು ತಿರಸ್ಕರಿಸಿದೆ. |

<table>
<tr>
<td>ಇ)</td>
<td>ಕ್ರೈಸ್ ಅಧೀನದಲ್ಲಿ ನಡೆಯುತ್ತಿದ್ದ ಅಲ್ಪಸಂಖ್ಯಾತ ವಸತಿ ಶಾಲೆಗಳನ್ನು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ವಿಲೀನಗೊಳಿಸಿದಂತೆ ಪರಿಶಿಷ್ಟ ಪಂಗಡಗಳ ಮೊರಾರ್ಜಿ ದೇಸಾಯಿ/ರಾಣಿಚನ್ನಮ್ಮ ವಸತಿ ಶಾಲೆಗಳನ್ನು ಸಮಾಜ ಕಲ್ಯಾಣ ಇಲಾಖೆಗೆ ವಿಲೀನಗೊಳಿಸಿ, ಸದರಿ ನೌಕರರುಗಳಿಗೆ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ವಿಳಂಬ ಮಾಡುತ್ತಿರುವುದಕ್ಕೆ ಕಾರಣಗಳೇನು:</td>
<td rowspan="2">ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವನ್ನು ವಿವಿಧ ಇಲಾಖೆಗಳಲ್ಲಿ ಮಂಜೂರಾದ ವಸತಿ ಶಾಲೆ/ಕಾಲೇಜುಗಳನ್ನು ಏಕರೂಪ ನಿರ್ವಹಣೆಯ ಸಲುವಾಗಿ ಮಂಜೂರು ಮಾಡಲಾಗಿದೆ. ವಸತಿ ಶಾಲೆ/ಕಾಲೇಜುಗಳ ಖಾಯಂ ಸಿಬ್ಬಂದಿಗಳಿಗೆ ಸರ್ಕಾರಿ ಶಾಲೆಗಳಲ್ಲಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ನೀಡಲಾಗುತ್ತಿರುವ ಕೆ.ಜಿ.ಐ.ಡಿ. ಒಂದು ವಿಶೇಷ ವೇತನ ಬಡ್ತಿ ಮತ್ತು ದಿನಾಂಕ:01.04.2018 ರಿಂದ ಜಾರಿಗೆ ಬರುವಂತೆ ಮಂಜೂರಾದ ನಿವೃತ್ತಿ ಮತ್ತು ಮರಣ ಉಪದಾನ ಹೊರತುಪಡಿಸಿ ಉಳಿದ ಎಲ್ಲಾ ಸವಲತ್ತುಗಳನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿನ ಖಾಯಂ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ನೀಡಲಾಗುತ್ತಿದೆ.<br><br>ಮುಂದುವರೆದು ನೂತನ ಪಿಂಚಣಿ ಯೋಜನೆಯನ್ನು ನೌಕರರು ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ವಿಸ್ತರಿಸಲಾಗಿದೆ.<br><br>ವಿವಿಧ ಉದ್ದೇಶಗಳನ್ನು ಈಡೇರಿಸುವ ಸಲುವಾಗಿ ಸರ್ಕಾರದಲ್ಲಿ ಸಂಘ/ಮಂಡಳಿ/ನಿಗಮಗಳನ್ನು ಸ್ಥಾಪಿಸಲಾಗಿರುತ್ತದೆ. ಅದರಂತೆ ಸಮಾಜ ಕಲ್ಯಾಣ ಇಲಾಖೆಯಲ್ಲಿಯೂ ಸಹ ಗ್ರಾಮೀಣ ಪ್ರದೇಶದ ಬಡ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಒದಗಿಸಲು ವಸತಿ ಶಾಲೆಗಳನ್ನು ಪ್ರಾರಂಭಿಸಿ, ಅವುಗಳನ್ನು ನಿರ್ವಹಿಸಲು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವನ್ನು ಸ್ಥಾಪಿಸಲಾಗಿದೆ.<br><br>ಸಂಘವು ಕರ್ನಾಟಕ ಸಹಕಾರ ಸಂಘಗಳ ನೋಂದಣಿ ಕಾಯ್ದೆ 1960 ರಡಿಯಲ್ಲಿ ಸ್ಥಾಪಿತವಾದ ಸಂಸ್ಥೆಯಾಗಿದ್ದು, ಸ್ವಾಯತ್ತ ಸಂಸ್ಥೆ / ಸಂಘ ಸಂಸ್ಥೆಗಳ ಸಿಬ್ಬಂದಿಗಳನ್ನು ರಾಜ್ಯ ಸಿವಿಲ್ ಸೇವೆಯಲ್ಲಿ ವಿಲೀನಗೊಳಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.</td>
</tr>
<tr>
<td>ಈ)</td>
<td>ಸದರಿ ಶಾಲೆಗಳನ್ನು ಸಮಾಜ ಕಲ್ಯಾಣ ಇಲಾಖೆಯಲ್ಲಿ ವಿಲೀನಗೊಳಿಸಿ, ಇತರೇ ಇಲಾಖೆಯ ಸರ್ಕಾರಿ ನೌಕರರಿಗೆ ಮತ್ತು ಶಿಕ್ಷಕರಿಗೆ ಇರುವ ಸೌಲಭ್ಯಗಳ ಸದರಿ ನೌಕರರುಗಳಿಗೆ ಸೌಲಭ್ಯಗಳನ್ನು ಕಲ್ಪಿಸಲು ಇನ್ನಾದರೂ ಸರ್ಕಾರ ಮುಂದಾಗುವುದೇ; ಯಾವ ಕಾಲಮಿತಿಯಲ್ಲಿ ಸದರಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು?</td>
</tr>
</table>

ಸಕಇ 92 ಮೊದೇಶಾ 2020

**(ಗೋವಿಂದ ಎಂ. ಕಾರಜೋಳ)**
ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ
ಮತ್ತು ಸಮಾಜ ಕಲ್ಯಾಣ ಸಚಿವರು